# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ ಃ ಜಂಆ(ಕಂ) ಃ ಪಿ.ಆರ್ ಃ 01 ಃ 2020-21

ಆಯುಕ್ತರ ಕಛೇರಿ
ನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ ಃ 28-04-2020

## ಸುತ್ತೋಲೆ

ವಿಷಯ ಃ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತ ವ್ಯಾಪ್ತಿಯಲ್ಲಿ 2020-21 ನೇ ಸಾಲಿನ ಆಸ್ತಿ ತೆರಿಗೆ ರಿಯಾಯಿತಿ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ ಃ ಸರ್ಕಾರದ ಅನುಮೋದನೆ ಕೋರಿ ದಿನಾಂಕ: 28-04-2020 ರಂದು ನಗರಾಭಿವೃದ್ಧಿ ಇಲಾಖೆಗೆ ಸಲ್ಲಿಸಲಾದ ಪ್ರಸ್ತಾವನೆ ಸಂಖ್ಯೆ:ಜಂಆ(ಕಂ) ಪಿಆರ್/01/2020-21

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2020-21 ನೇ ಸಾಲಿಗೆ ಸಂಬಂಧಪಟ್ಟಂತೆ ಆರ್ಥಿಕ ವರ್ಷದ ಪೂರ್ಣ ಆಸ್ತಿ ತೆರಿಗೆಯನ್ನು ದಿನಾಂಕ : 30-04-2020 ರ ಒಳಗೆ ಪಾವತಿಸಿದ್ದಲ್ಲಿ ಶೇಕಡ 5 ರಷ್ಟು ರಿಯಾಯಿತಿಯನ್ನು ನೀಡಲು ಅವಕಾಶವಿರುತ್ತದೆ. 2020-21 ನೇ ಸಾಲಿನ ಆಸ್ತಿತೆರಿಗೆ ಸಂಗ್ರಹಣೆಯು ಏಪ್ರಿಲ್ ಮಾಹೆಯಿಂದ ಪ್ರಾರಂಭಗೊಂಡಿದ್ದು, ದೇಶದ್ಯಾಂತ ಕೊರೋನಾ / ಕೋವಿಡ್-19 ರ ನಿಯಂತ್ರಣಕ್ಕಾಗಿ ನಿಷೇದಾಜ್ಞೆ / ಲಾಕ್‌ಡೌನ್ ಜಾರಿಯಲ್ಲಿದ್ದು, ಪರಿಸ್ಥಿತಿಯು ಗಂಭೀರವಾಗಿರುತ್ತದೆ. ಸಾರ್ವಜನಿಕರು ಯಾವುದೇ ಸಂಧರ್ಭದಲ್ಲಿಯೂ ಅನಗತ್ಯವಾಗಿ ಹೊರಬಾರದಂತೆ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕೆಂದು ಸರ್ಕಾರದಿಂದ ಕಟ್ಟುನಿಟ್ಟಿನ ಆಜ್ಞೆ ವಿಧಿಸಲಾಗಿರುತ್ತದೆ. ತೆರಿಗೆದಾರರು ಬ್ಯಾಂಕ್‌ಗಳಿಗೆ ಭೇಟಿ ನೀಡಿ ಆಸ್ತಿತೆರಿಗೆ ಪಾವತಿಸಲು ಕಷ್ಟಸಾಧ್ಯವಾಗಿರುತ್ತದೆ.

ತೆರಿಗೆದಾರರ ಅನುಕೂಲಕ್ಕಾಗಿ ಹಾಗೂ ಪಾಲಿಕೆಯ ತೆರಿಗೆ ಸಂಗ್ರಹಣೆ ಹಿತದೃಷ್ಟಿಯಿಂದ ನಗರ ಪಾಲಿಕೆ ಸಭೆಯ ನಿರ್ಣಯ ಹಾಗೂ ಸರ್ಕಾರದ ಆದೇಶವನ್ನು ನಿರೀಕ್ಷಿಸಿ 2020-21ನೇ ಸಾಲಿಗೆ ಪೂರ್ಣವಾಗಿ ಆಸ್ತಿ ತೆರಿಗೆ ಪಾವತಿಸುವವರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು ಇನ್ನೂ 31 ದಿನಗಳಿಗೆ ವಿಸ್ತರಿಸಿ ದಿನಾಂಕ ಃ 31-5-2020ರ ಒಳಗೆ ಪಾವತಿಸುವ ಎಲ್ಲಾ ತೆರಿಗೆದಾರರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡಲು ಆದೇಶಿಸಿದೆ.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
2. ಪೂಜ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
3. ಆಡಳಿತ / ವಿರೋಧ ಪಕ್ಷದ ನಾಯಕರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
4. ಅಧ್ಯಕ್ಷರು, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸಿದೆ.
5. ವಿಶೇಷ ಆಯುಕ್ತರು (ಕಂದಾಯ) ರವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
6. ಜಂಟಿ ಆಯುಕ್ತರು (ಕಂದಾಯ) ರವರ ಮಾಹಿತಿಗಾಗಿ ಕಳುಹಿಸಿಕೊಡುತ್ತಾ, ಈ ಸಂಬಂಧ ಆಸ್ತಿತೆರಿಗೆ ತಂತ್ರಾಂಶದಲ್ಲಿ ಸೂಕ್ತ ಮಾರ್ಪಾಡು ಮಾಡುವಲ್ಲಿ ಕ್ರಮವಹಿಸಲು ಸೂಚಿಸಿದೆ.
7. ಎಲ್ಲಾ ವಲಯಗಳ ಅಪರ/ಜಂಟಿ/ಉಪ ಆಯುಕ್ತರಗಳ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.
8. ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳ ಸೂಕ್ತಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.
9. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ರವರಿಗೆ ಕಳುಹಿಸಿಕೊಡುತ್ತಾ, ಮೇಲ್ಕಂಡ ಅಂಶವನ್ನು ತೆರಿಗೆದಾರರ ಮಾಹಿತಿಗಾಗಿ ಪ್ರಮುಖ ದಿನಪತ್ರಿಕೆಗಳಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.